# ಭಗವಂತನ ಅರಿವು



❁ ಭಗವಂತನನ್ನು ಯಾರು ತಾನೇ ಅರಿತುಕೊಳ್ಳಬಲ್ಲರು? ನಾನು ಆ ಪ್ರಯತ್ನವನ್ನೇ ಮಾಡುವುದಿಲ್ಲ. ನಾನು ಆತನನ್ನು ಕೇವಲ 'ತಾಯಿ' ಅಂತ ಮಾತ್ರ ಕೂಗುತ್ತೇನೆ. ತಾಯಿ ತನ್ನ ಇಚ್ಛೆಯಿದ್ದಂತೆ ಮಾಡಲಿ. ಆಕೆಯ ಇಚ್ಛೆಯಿದ್ದರೆ ತಾನೇ ತೋರಿಸಿಕೊಡುತ್ತಾಳೆ — ತಾನು ಏನು ಎಂಬುದನ್ನು. ಇಲ್ಲದಿದ್ದರೆ ಇಲ್ಲ. ನನ್ನದು ಬೆಕ್ಕಿನ ಮರಿಯ ಸ್ವಭಾವ. ಕೇವಲ ಅದು, 'ಮಿಯಾವ್!' 'ಮಿಯಾವ್!' ಅಂತ ಕೂಗುತ್ತದೆ. ಉಳಿದ ತನ್ನ ಯೋಗಕ್ಷೇಮವನ್ನೆಲ್ಲಾ ತಾಯಿಗೆ ಬಿಟ್ಟುಬಿಟ್ಟಿರುತ್ತದೆ. ತಾಯಿಬೆಕ್ಕು ಕೆಲವು ವೇಳೆ ಮರಿಯನ್ನು ಅಡಿಗೆಮನೆಯಲ್ಲಿ, ಇನ್ನು ಕೆಲವು ವೇಳೆ ಯಜಮಾನನ ಹಾಸಿಗೆ ಮೇಲೆ ಇಡುತ್ತದೆ. ಚಿಕ್ಕ ಮಗುವಿಗೆ ತಾಯಿ ಮಾತ್ರ ಬೇಕು. ತನ್ನ ತಾಯಿಗೆ ಎಷ್ಟು ಐಶ್ವರ್ಯವಿದೆ ಎಂಬುದು ಅದಕ್ಕೆ ಗೊತ್ತಿರುವುದಿಲ್ಲ; ತಿಳಿಯಲಿಚ್ಛಿಸುವುದೂ ಇಲ್ಲ. ಅದಕ್ಕೆ ಕೇವಲ ಗೊತ್ತಿದೆ: 'ನನ್ನ ತಾಯಿ ಇದ್ದಾಳೆ; ಇನ್ನು ನನಗೇನು ಯೋಚನೆ?' ದಾಸಿಯ ಮಗುವಿಗೂ ಗೊತ್ತಿದೆ, ತನಗೊಬ್ಬಳು ತಾಯಿ ಇದ್ದಾಳೆ ಅಂತ. ಅದಕ್ಕೂ ಯಜಮಾನನ ಮಗುವಿಗೂ ಜಗಳ ಬಂತು ಎಂದರೆ, ಆಗ ಅದು ಹೇಳುತ್ತದೆ, 'ನನ್ನ ತಾಯಿ ಇದ್ದಾಳೆ, ನೋಡಿಕೊ. ಹೋಗಿ ಹೇಳಿ ಬಿಡುತ್ತೇನೆ.' ನನ್ನದು ಸಂತಾನ ಭಾವ.

❁ ಪ್ರತಿಯೊಬ್ಬನೂ ತನ್ನ ಬುದ್ಧಿಶಕ್ತಿಗನುಸಾರ ಭಾವಿಸುತ್ತಾನೆ, ಭಗವಂತನ ಸಂಬಂಧವಾಗಿ ತಾನು ಎಲ್ಲವನ್ನೂ ಅರಿತುಕೊಂಡುಬಿಟ್ಟಿದ್ದೇನೆ ಎಂಬುದಾಗಿ. ನೀವು ಹೇಳುತ್ತೀರಲ್ಲ, ಒಂದು ಇರುವೆ ಸಕ್ಕರೆಯ ಗುಡ್ಡದ ಹತ್ತಿರ ಹೋಗಿ ಅದರ ಒಂದು ಕಣ ತಿನ್ನುವುದರಲ್ಲೇ ಅದರ ಹೊಟ್ಟೆ ತುಂಬಿಹೋದರೂ ಭಾವಿಸುತ್ತದೆ, ಮುಂದಿನ ಸಲ ಬಂದು ಈ ಇಡೀ ಗುಡ್ಡವನ್ನೇ ತನ್ನ ಗೂಡಿಗೆ ಸಾಗಿಸಿಬಿಡುತ್ತೇನೆ ಎಂಬುದಾಗಿ.

❁ ಪರಬ್ರಹ್ಮನ ಸ್ವರೂಪ ಏನೆಂಬುದಾಗಿ ಬಾಯಲ್ಲಿ ಹೇಳಲಾಗುವುದಿಲ್ಲ. ಅದರ ಸಂಬಂಧವಾಗಿ ಮಾತೇ ಹೊರಡುವ ಹಾಗಿಲ್ಲ. ಅನಂತವನ್ನು ಯಾರು ತಾನೇ ಮಾತಿನಿಂದ ವರ್ಣಿಸಬಲ್ಲರು? ಹಕ್ಕಿ ಎಷ್ಟೇ ಎತ್ತರಕ್ಕೆ ಹಾರಿಹೋದರೂ, ಅದು ಹಾರಿಹೋಗಬೇಕಾದ ಎತ್ತರ ಇನ್ನೂ ಉಳಿದುಕೊಂಡೇ ಇರುತ್ತದೆ.

❁ ಬ್ರಹ್ಮಜ್ಞಾನಾವಸ್ಥೆಗೂ ಅತೀತವಾದ್ದು ಬೇರೊಂದಿದೆ. ಜ್ಞಾನ ದೊರೆತ ಮೇಲೆ ವಿಜ್ಞಾನ. ಯಾರಿಗೆ ಜ್ಞಾನದ ಅರಿವು ಇದೆಯೋ, ಆತನಿಗೆ ಅಜ್ಞಾನದ ಅರಿವೂ ಇರುತ್ತದೆ. ವಸಿಷ್ಠ ತನ್ನ ನೂರು ಮಕ್ಕಳನ್ನೂ ಕಳೆದುಕೊಂಡಿದ್ದಕ್ಕಾಗಿ ಶೋಕಾಕ್ರಾಂತನಾದ. ವಸಿಷ್ಠನಂಥ ಜ್ಞಾನಿ ಏಕೆ ಪುತ್ರಶೋಕಾಕ್ರಾಂತನಾಗಬೇಕು ಎಂಬುದಾಗಿ ಲಕ್ಷ್ಮಣ ರಾಮನನ್ನು ಕೇಳಿದಾಗ, ಆತ ಹೇಳಿದ: 'ನೀನು ಜ್ಞಾನಾಜ್ಞಾನಗಳಿಗೆ ಅತೀತನಾಗು.' ಯಾರಲ್ಲಿ ಜ್ಞಾನವು ಇರುತ್ತದೆಯೋ, ಆತನಲ್ಲಿ ಅಜ್ಞಾನವೂ ಇರುತ್ತದೆ. ಕಾಲಿಗೆ ಮುಳ್ಳು ಚುಚ್ಚಿಕೊಂಡರೆ, ಬೇರೊಂದು ಮುಳ್ಳನ್ನು ಹುಡುಕಿ ತಂದು ಅದನ್ನು ತೆಗೆಯಬೇಕಾಗುತ್ತದೆ; ಬಳಿಕ ಎರಡನೆಯ ಮುಳ್ಳನ್ನೂ ಬಿಸಾಡಿಬಿಡಬೇಕು.

❁ ವಿಜ್ಞಾನವೆಂದರೇನು? ಭಗವಂತನನ್ನು ವಿಶೇಷ ರೂಪದಿಂದ ಅರಿಯುವಿಕೆ. ಕಟ್ಟಿಗೆಯಲ್ಲಿ ಬೆಂಕಿಯಿದೆ ಎಂಬ ಅರಿವು ಮತ್ತು ದೃಢಶ್ರದ್ಧೆಗೆ 'ಜ್ಞಾನ' ಅಂತ ಹೆಸರು. ಅದರ ಬೆಂಕಿಯಿಂದ ಅನ್ನ ಬೇಯಿಸಿ ಉಂಡು ತಿಂದು, ಹೃಷ್ಟಪುಷ್ಟರಾಗುವುದಕ್ಕೆ 'ವಿಜ್ಞಾನ' ಅಂತ ಹೆಸರು. ಭಗವಂತನಿದ್ದಾನೆ ಎಂಬುದರ ಸ್ವಾತ್ಮಾನುಭವ ಹೊಂದುವುದಕ್ಕೆ 'ಜ್ಞಾನ' ಅಂತ ಹೆಸರು. ಆದರೆ ಆತನೊಡನೆ ಸಲಿಗೆಯಿಂದ ಮಾತುಕತೆಯಾಡುವುದಕ್ಕೆ, ಆತನೊಡನೆ ವಾತ್ಸಲ್ಯ, ಸಖ್ಯ, ದಾಸ್ಯ, ಮಧುರ — ಈ ಭಾವಗಳಿಂದ ಆನಂದಪಡುವುದಕ್ಕೆ 'ವಿಜ್ಞಾನ' ಅಂತ ಹೆಸರು. ಭಗವಂತನೇ ಈ ಜೀವಜಗತ್ತು ಎಲ್ಲವೂ ಆಗಿದ್ದಾನೆ ಎಂಬುದರ ಪ್ರತ್ಯಕ್ಷ ದರ್ಶನಕ್ಕೆ 'ವಿಜ್ಞಾನ' ಅಂತ ಹೆಸರು.

❁ ಭಗವಂತನಲ್ಲಿ ಭಕ್ತಿಯಿಲ್ಲದ ನಾಮಮಾತ್ರ ಪಂಡಿತರು ಅಸಂಬದ್ಧವಾಗಿ ಮಾತುಕತೆ ಆಡುತ್ತಾರೆ. ಪಂಡಿತ ಸಮಾಧ್ಯಾಯಿ, ತನ್ನ ಸಂಭಾಷಣೆಯ ಸಮಯದಲ್ಲಿ ಒಮ್ಮೆ ಹೇಳಿದ: 'ಭಗವಂತ ನೀರಸ, ನಾವು ನಮ್ಮ ಪ್ರೇಮ ಭಕ್ತಿಗಳಿಂದ ಆತನನ್ನು ಸರಸನನ್ನಾಗಿ ಮಾಡಿಕೊಳ್ಳಬೇಕು.' ಹಾಗೇ ನೋಡಿ! ವೇದ ಯಾರನ್ನು 'ರಸಸ್ವರೂಪ' ಅಂತ ಘೋಷಿಸುತ್ತಿದೆಯೋ ಆತನನ್ನು 'ನೀರಸ' ಅಂತ ವರ್ಣಿಸುವುದು! ಇದು ತೋರಿಸುತ್ತದೆ, ಆ ಪಂಡಿತನಿಗೆ ಭಗವಂತನ ನಿಜಸ್ವರೂಪ ಏನು ಎಂಬುದು ಸ್ವಲ್ಪವೂ ಗೊತ್ತಿಲ್ಲ ಎಂಬುದನ್ನು. ಅದಕ್ಕಾಗಿಯೆ ಆತನ ಮಾತಿನಲ್ಲಿ ಅಸಂಬದ್ಧತೆ.

❁ ಪ್ರತಿಯೊಬ್ಬನೂ ತನ್ನ ತನ್ನ ಭಾವದಂತೆ ಭಗವಂತನನ್ನು ನೋಡುತ್ತಾನೆ. ಉದಾಹರಣೆಗೆ ತಾಮಸಿಕ ಭಕ್ತನನ್ನು ತೆಗೆದುಕೊಳ್ಳಿ. ಆತ ಭಾವಿಸುತ್ತಾನೆ, ಭಗವತಿ ಆಡನ್ನು ತಿನ್ನುತ್ತಾಳೆ ಎಂದು. ಅದಕ್ಕಾಗಿ ಆಕೆಗೆ ಬಲಿಯನ್ನು ಅರ್ಪಿಸುತ್ತಾನೆ. ಹಾಗೆಯೇ ರಾಜಸಿಕ ಭಕ್ತ ಅನೇಕ ಬಗೆಯ ಪಲ್ಯ ಮತ್ತು ಅನ್ನವನ್ನು ಅರ್ಪಿಸುತ್ತಾನೆ. ಆದರೆ ಸಾತ್ತ್ವಿಕ ಭಕ್ತನಲ್ಲಿ ಯಾವ ವಿಧವಾದ ಬಾಹ್ಯಪೂಜೆಯ ಆಡಂಬರವಿರುವುದಿಲ್ಲ. ಆತ ಪೂಜೆ ಮಾಡುತ್ತಿರುವುದು ಜನರಿಗೆ ಗೊತ್ತೇ ಇರುವುದಿಲ್ಲ. ಹೂವು ಇಲ್ಲದೆ ಇತ್ತು ಎಂದರೆ ಬಿಲ್ವಪತ್ರೆ, ಗಂಗಾಜಲ ಇವುಗಳಿಂದಲೇ ಪೂಜೆ ಮಾಡಿಬಿಡುತ್ತಾನೆ. ಆತನ ನೈವೇದ್ಯಕ್ಕೆ ಒಂದು ಹಿಡಿ ಬೆಲ್ಲದ ಪುರಿಯೋ ಅಥವಾ ಒಂದೆರಡು ಬತ್ತಾಸವೋ ಇದ್ದರೆ ಸಾಕು. ಅಪರೂಪಕ್ಕೆ ಒಮ್ಮೊಮ್ಮೆ ಭಗವಂತನಿಗೆ ಪಾಯಸ ಮಾಡಿ ಅರ್ಪಿಸುತ್ತಾನೆ.

ಶ್ರೀರಾಮಕೃಷ್ಣ ವಚನವೇದದಿಂದ